ಶ್ರೀ ಕೆ.ಎನ್. ನಾಗೇಗೌಡ : ಅಧ್ಯಕ್ಷರೆ, ಒಂದು ಮನವಿ ಏನೆಂದರೆ ಮಂಡ್ಯ ಜಿಲ್ಲೆಯಲ್ಲಿ ಇಂಥ ಒಂದು ಕೆಲಸವಾಗಿ ಅವರ ಪಕ್ಷ ಸರ್ವನಾಶವಾಯಿತಲ್ಲಾ ಎನ್ನುವುದೇ ಅವರಿಗೆ ಬಂದಿರುವ ಅಸೂಯೆ.

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಈ ದಿನದ 22ನೇ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ ಒಟ್ಟು 68 ಪ್ರಶ್ನೆಗಳ ಪೈಕಿ 56 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ರಾಜ್ಯದಲ್ಲಿ ಅಂತರ್ಜಲದ ಮಟ್ಟ ಕುಸಿತ.

1701 - ಶ್ರೀ ಎಸ್. ಸುರೇಶ್ ಕುಮಾರ್ (ರಾಜಾಜಿನಗರ) : ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲೆಲ್ಲಾ ಅಂತರ್ಜಲದ ಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ?

ಆ) ಅಂತರ್ಜಲ ಮಟ್ಟವನ್ನು ವೃದ್ಧಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು? ಕಳೆದ ಮೂರು ವರ್ಷಗಳಲ್ಲಿ ಈ ಕ್ರಮಗಳಿಗಾಗಿ ಖರ್ಚು ಮಾಡಲಾಗಿರುವ ಹಣವೆಷ್ಟು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು) :

ಅ) ಹೌದು

ಆ) ಅಂತರ್ಜಲ ಮಟ್ಟವು ಕುಸಿಯುತ್ತಿರುವ ತಾಲ್ಲೂಕುಗಳನ್ನು ಗುರುತಿಸಲಾಗಿದ್ದು, ಈ ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟವನ್ನು ಅಭಿವೃದ್ಧಿಪಡಿಸುವ ಸಲುವಾಗಿ ದೂರ ಸಂವೇದನಾ ತಂತ್ರಜ್ಞಾನ ಮಾಹಿತಿಯ ಅಧ್ಯಯನ ಹಾಗೂ ಭೂಭೌತ ಸಮೀಕ್ಷೆಗಳ ನೆರವಿನಿಂದ ಕೃತಕ ಮರುಪೂರೈಕೆ ರಚನೆಗಳ ಸ್ಥಳಗಳನ್ನು ಗುರುತಿಸಲಾಗುತ್ತಿದೆ. ಮಾಹಿತಿಯ ಆಧಾರದ ಮೇಲೆ ಸೂಕ್ತ ಅಂತರ್ಜಲ ಕೃತಕ ಮರುಪೂರೈಕೆ ರಚನೆಗಳಾದ ಚೆಕ್ ಡ್ಯಾಂ, ಗಲ್ಲಿ ಪ್ಲಗ್, ಪರ್‌ಕುಲೇಶನ್ ಪಾಂಡ್ಸ್, ಇನ್‌ಫಿಲ್‌ಟ್ರೇಷನ್ ವೆಲ್ಸ್, ಸಬ್‌ಸರ್‌ಫೇಸ್ ಡೈಕ್ ಮುಂತಾದವುದಗಳನ್ನು ಪ್ರಯೋಗಾತ್ಮಕವಾಗಿ ರಚಿಸಲಾಗುತ್ತಿದೆ.

ಕಳೆದ ಮೂರು ವರ್ಷಗಳಲ್ಲಿ ಅಂತರ್ಜಲ ಕೃತಕ ಮರು ಪೂರೈಕೆ ರಚನೆಗಳ ನಿರ್ಮಾಣಕ್ಕಾಗಿ ಸುಮಾರು 70.00 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ.

ವಕ್ಫ್ ವತಿಯಿಂದ ಹಣ ವೆಚ್ಚ ಮಾಡಿರುವ ಕುರಿತು

1702 - ಶ್ರೀ ಹೆಚ್.ಡಿ. ಬಸವರಾಜು (ವಿರಾಜಪೇಟೆ) : ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?